## ಕರ್ನಾಟಕ ಸರ್ಕಾರ

ನಂ.ಗ್ರಾಅಪ/04/ಗ್ರಾಪಂಕಾ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:25-02-2016

### ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯಕ್ರಮ ಅನುಷ್ಠಾನದಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಪರಿಹರಿಸಲು ಕ್ರಮ ಕೈಗೊಳ್ಳುವ ಬಗ್ಗೆ.

---

ರಾಜ್ಯದ ಗ್ರಾಮ ಪಂಚಾಯತಿಗಳು ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಹಲವಾರು ವೈಯಕ್ತಿಕ, ಸಮುದಾಯ, ಸವಲತ್ತುಗಳನ್ನು ನೀಡುವಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಲ್ಲಿ ಉಲ್ಲೇಖಿಸಿರುವಂತೆ ಕರ್ತವ್ಯ ನಿರ್ವಹಿಸುತ್ತಿವೆ.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಹಾಯಕ ನಿರ್ದೇಶಕರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹಲವಾರು ಅನಿಯಮಿತ ಸಭೆಗಳನ್ನು ಕರೆಯುತ್ತಿರುವುದು, ಇ-ಸ್ವತ್ತು ಕಾರ್ಯಕ್ರಮದ ಅನುಷ್ಠಾನದಲ್ಲಿನ ತೊಂದರೆಗಳು, ಕಂದಾಯ ವಸೂಲಾತಿಯಲ್ಲಿ ನೌಕರ ವರ್ಗದವರ ಜೊತೆ ಚುನಾಯಿತ ಪ್ರತಿನಿಧಿಗಳ ಅಸಹಕಾರ, ಗ್ರಾಮ ಪಂಚಾಯತಿ ನೌಕರರ ವೇತನವನ್ನು ಪ್ರತಿ ತಿಂಗಳು 1ನೇ ತಾರೀಖಿನೊಳಗೆ ಮಾಡದಿರುವುದು, ಕರ್ತವ್ಯ ನಿರ್ವಹಿಸುವಲ್ಲಿ ಮಾನಸಿಕ ಒತ್ತಡವಿರುವುದು, ಗ್ರಾಮ ಪಂಚಾಯತಿ ಸಿಬ್ಬಂದಿಗಳ ಕುಂದುಕೊರತೆಗಳನ್ನು ನಿವಾರಿಸಲು ತಾಲ್ಲೂಕು ಮಟ್ಟದಲ್ಲಿ ಪ್ರತ್ಯೇಕ ಸಭೆ ಕರೆಯದಿರುವುದು, ಹೆಚ್ಚು ಸಾರಿಗೆ ಸಂಪರ್ಕವಿಲ್ಲದ ಕಡೆ ವರ್ಗಾವಣೆ ಮತ್ತು ನಿಯೋಜನೆ ಮಾಡುವುದರಿಂದ ಅಂಗವಿಕಲ ಮತ್ತು ಮಹಿಳಾ ನೌಕರರಿಗೆ ತೊಂದರೆಯಾಗಿರುವುದು, ಹಲ್ಲೆ ದೌರ್ಜನ್ಯಗಳಾದಾಗ ಮೇಲಾಧಿಕಾರಿಗಳು ನೆರವಿಗೆ ಬಾರದೆ ಅಸಡ್ಡೆ ತೋರುವುದು, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳದಿರುವುದು, ಮಹಿಳಾ ಅಧಿಕಾರಿಗಳ ಮೇಲೆ ದೌರ್ಜನ್ಯ ಎಸಗುವುದು, ವಿವಿಧ ರಜೆ ಸೌಲಭ್ಯ ಮಂಜೂರು ಮಾಡದಿರುವುದು, ತಪ್ಪು ನಿರ್ಣಯಗಳನ್ನು ಮಾಡುವುದು ಮತ್ತು ಅವುಗಳನ್ನು ಅನುಷ್ಠಾನಕ್ಕೆ ತರುವಂತೆ ಒತ್ತಡ ತರುತ್ತಿರುವುದರಿಂದ ಕೆಲಸ ಕಾರ್ಯ ಮಾಡಲು ಕಷ್ಟವಾಗುತ್ತಿದೆ ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 232, 233 ಮತ್ತು 234 ರಲ್ಲಿ ಪರಿವೀಕ್ಷಣೆ ಹಾಗೂ ಮೇಲ್ವಿಚಾರಣೆ ಬಗ್ಗೆ ವಿವರಿಸಲಾಗಿದೆ. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯಕ್ರಮ ಅನುಷ್ಠಾನದಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಪರಿಹರಿಸಲು ಈ ಕೆಳಕಂಡಂತೆ ಕೂಡಲೇ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿದೆ.

1) ದಿನಾಂಕ:19-10-2011 ರಂದು ಹೊರಡಿಸಿರುವ ಸರ್ಕಾರದ ಸುತ್ತೋಲೆಯ ಅನುಸಾರ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಯನ್ನು ಮಾಸಿಕವಾಗಿ ಒಂದು ದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಕಡ್ಡಾಯವಾಗಿ ಏರ್ಪಡಿಸುವುದು ಮತ್ತು ತಿಂಗಳಿಗೊಮ್ಮೆ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಯನ್ನು ಕರೆಯುವುದು. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತ್ರೈಮಾಸಿಕವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರು / ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು / ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯನ್ನು ಕಂದಾಯ ಉಪವಿಭಾಗದನ್ವಯ ಕರೆದು ಪ್ರಗತಿ ಪರಿಶೀಲನೆ, ಅಧಿನಿಯಮ, ಸುತ್ತೋಲೆ, ಅಧಿಸೂಚನೆಗೆ ಸಂಬಂಧಿಸಿದಂತೆ ಎಲ್ಲಾರಿಗೂ ಮಾಹಿತಿ, ತಿಳುವಳಿಕೆ ಹಾಗೂ ಕಾರ್ಯಕ್ರಮ ಅನುಷ್ಠಾನದಲ್ಲಿ ಪ್ರಗತಿಪರ ಚಿಂತನೆ ನಡೆಸುವಂತೆ ಕೆಳಸ್ತರದ ಎಲ್ಲಾ ಅಧಿಕಾರಿಗಳಿಗೆ ಮನೋಸ್ಥೈರ್ಯ ತುಂಬಲು ಹಾಗೂ ಪ್ರಗತಿ ಪರಿಶೀಲನೆ ನಡೆಸಲು ಕ್ರಮ ವಹಿಸುವುದು.
2) ಅನಗತ್ಯವಾಗಿ ಮಾಡುತ್ತಿರುವ ವಿಡಿಯೋ ಕಾನ್ಫರೆನ್ಸ್‌ಗಳನ್ನು ರದ್ದುಪಡಿಸಿ, ನಿಯಮಿತವಾಗಿ ವಿಡಿಯೋ ಕಾನ್ಫರೆನ್ಸ್‌ಗಳನ್ನು ನಿಗದಿತ ಸಮಯದಲ್ಲಿ ಅಂದರೆ ಬೆಳಿಗ್ಗೆ 10.30 ರಿಂದ 5.00 ಗಂಟೆಯೊಳಗೆ ಮಾಡಲು ಕ್ರಮ ಕೈಗೊಳ್ಳತಕ್ಕದ್ದು.
3) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3ಎ ರಂತೆ ಗ್ರಾಮ ಪಂಚಾಯತಿಗೆ ತೆರಿಗೆಗಳನ್ನು ಸಂದಾಯ ಮಾಡುವಂತೆ ಮತ್ತು ಸಾಲಗಳನ್ನು ಮರು ಸಂದಾಯ ಮಾಡುವಂತೆ ಗ್ರಾಮ ಪಂಚಾಯತಿಯ ಸದಸ್ಯರನ್ನು ಮನವೊಲಿಸಲು ಗ್ರಾಮ ಪಂಚಾಯತಿಯು ಪ್ರಯತ್ನಿಸಬೇಕಾಗುತ್ತದೆ. ಇದಲ್ಲದೆ ಸದರಿ ಅಧಿನಿಯಮದ ಪ್ರಕರಣ 58 ರಂತೆ ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ನಿಯತಕಾಲಿಕವಾಗಿ ಪರಿಶೀಲಿಸುವುದು ಮತ್ತು ವಸೂಲಿ ಮಾಡುವುದು ಗ್ರಾಮ ಪಂಚಾಯತಿಯ ಪ್ರಕಾರ್ಯವಾಗಿರುವುದರಿಂದ ಗ್ರಾಮ ಪಂಚಾಯತಿ ಚುನಾಯಿತ ಸದಸ್ಯರು ತೆರಿಗೆ ವಸೂಲಿ ಮಾಡಲು ಗ್ರಾಮ ಪಂಚಾಯತಿ ನೌಕರರಿಗೆ ಸಹಕಾರ ನೀಡುವಂತೆ ತಿಳಿಸುವುದು.

4) ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಗ್ರಾಮ ಪಂಚಾಯತಿಯೊಂದಿಗೆ ಸಹಕರಿಸಿ, ಯೋಜನೆಗಳು / ಕಾರ್ಯಕ್ರಮಗಳು ಯಶಸ್ವಿಯಾಗಿ ಅನುಷ್ಠಾನಗೊಳ್ಳಲು ಕ್ರಮ ವಹಿಸುವುದು. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 241, 242 ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯ-ವ್ಯಯ ಮತ್ತು ಲೆಕ್ಕ ಪತ್ರಗಳು) ನಿಯಮಗಳು, 2006 ಹಾಗೂ ಕಾಲಕಾಲಕ್ಕೆ ಆಯಾ ಯೋಜನೆಗಳಿಗೆ ಹೊರಡಿಸುವ ಮಾರ್ಗಸೂಚಿಗಳನುಸಾರ ಗ್ರಾಮ ಪಂಚಾಯತಿಗಳು ಬಜೆಟ್ ತಯಾರಿಸಲು ಕ್ರಮವಹಿಸತಕ್ಕದ್ದು.

5) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಮತ್ತು ನಿಯಮಗಳು, ಹಾಗೂ ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನುಸಾರ ಗ್ರಾಮ ಪಂಚಾಯತಿಗಳು ನಿರ್ಣಯಗಳನ್ನು ತೆಗೆದುಕೊಳ್ಳಲು ಕ್ರಮವಹಿಸತಕ್ಕದ್ದು. ಕಾನೂನುಬಾಹಿರವಾಗಿ ನಿರ್ಣಯ ತೆಗೆದುಕೊಳ್ಳುವ ಗ್ರಾಮ ಪಂಚಾಯತಿ ಅಧ್ಯಕ್ಷರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ಮತ್ತು 48(4) ರನ್ವಯ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು. ಗ್ರಾಮ ಪಂಚಾಯತಿ ವಿರುದ್ಧವಾಗಿದ್ದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 268 ರಡಿ ಗ್ರಾಮ ಪಂಚಾಯತಿ ವಿರ್ಸಜನೆ ಮಾಡಲು ಕ್ರಮ ವಹಿಸುವುದು.

6) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 3-ಎ ರಂತೆ ಗ್ರಾಮ ಸಭೆ, ಪ್ರಕರಣ 52 ರಂತೆ ಗ್ರಾಮ ಪಂಚಾಯತಿ ಸಭೆ ಮತ್ತು ಪ್ರಕರಣ 61 ಮತ್ತು 62 ರಂತೆ ಸ್ಥಾಯಿ ಸಮಿತಿ ಮತ್ತು ಇತರೆ ಸಮಿತಿಗಳ ಸಭೆಗಳನ್ನು ಕಾಲಕಾಲಕ್ಕೆ ನಡೆಸಲು ಕ್ರಮ ವಹಿಸುವುದು.

7) ಗ್ರಾಮ ಪಂಚಾಯತಿಯ ಯಾವುದೇ ವಸೂಲಾತಿ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 246 ಮತ್ತು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯ-ವ್ಯಯ ಮತ್ತು ಲೆಕ್ಕ ಪತ್ರಗಳು) ನಿಯಮಗಳು, 2006 ರನ್ವಯ ಕ್ರಮ ವಹಿಸತಕ್ಕದ್ದು.

8) ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ತೆರಿಗೆಯಲ್ಲಿ ಶಿಕ್ಷಣ, ಆರೋಗ್ಯ, ಗ್ರಂಥಾಲಯ ಮತ್ತು ಭಿಕ್ಷುಕರ ಉಪಕರವನ್ನು ವಸೂಲಿ ಮಾಡಿ ಸಂಬಂಧಿಸಿದ ಇಲಾಖೆಗಳ ಲೆಕ್ಕ ಶೀರ್ಷಿಕೆಗಳಿಗೆ ಪಾವತಿ ಮಾಡಲು ಕ್ರಮ ವಹಿಸತಕ್ಕದ್ದು.

9) ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಮತ್ತು ಗ್ರಾಮ ಪಂಚಾಯತಿ ನೌಕರರ ವೇತನವನ್ನು ಪ್ರತಿ ತಿಂಗಳ 5ನೇ ತಾರೀಖಿನೊಳಗೆ ಪಾವತಿಸಲು ಕ್ರಮ ವಹಿಸುವುದು.

10) ಅಂಗವಿಕಲ ಮತ್ತು ಮಹಿಳಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಅನಗತ್ಯವಾಗಿ ವರ್ಗಾವಣೆ ಮತ್ತು ನಿಯೋಜನೆ ಮಾಡುವುದನ್ನು ತಡೆಗಟ್ಟಲು ಕ್ರಮ ವಹಿಸುವುದು.

11) ಗ್ರಾಮ ಪಂಚಾಯತಿ ನೌಕರರು ಮತ್ತು ಮಹಿಳಾ ನೌಕರರ ಮೇಲೆ ಅನಗತ್ಯವಾಗಿ ಹಲ್ಲೆ, ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ನಾಗರೀಕ ದಂಡ ಸಂಹಿತೆ (ಸಿವಿಲ್ ಕ್ರಿಮಿನಲ್ ಪ್ರೋಸಿಜರ್) ಪ್ರಕ್ರಿಯೆಯಡಿ ಮತ್ತು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 281 ರಡಿ ಕೆಲವು ಅಧಿಕಾರಿಗಳನ್ನು ಅಕ್ರಮವಾಗಿ ಅಡ್ಡಿಪಡಿಸುವುದರ ಬಗ್ಗೆ ವಿವರಿಸಲಾಗಿದ್ದು, ಅದರಂತೆ ಕ್ರಮ ಕೈಗೊಳ್ಳುವುದು. ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಲ್ಲೆ ಪ್ರಕರಣಗಳಲ್ಲಿ ಭಾಗಿಯಾಗಿದ್ದು, ಆರೋಪ ಸಾಬೀತಾದಲ್ಲಿ ದುರ್ವತನೆ ಎಂದು ಪರಿಗಣಿಸಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರನ್ವಯ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

12) ತಪ್ಪು ಎಸಗದಿದ್ದರೂ ಅನಗತ್ಯವಾಗಿ ನೋಟೀಸು ನೀಡಿ ಇಲಾಖಾ ತನಿಖೆ ನಡೆಸುವುದನ್ನು ತಡೆಗಟ್ಟುವುದು.

13) ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಮತ್ತು ಗ್ರಾಮ ಪಂಚಾಯತಿ ನೌಕರರಿಗೆ ಸಂದರ್ಭಾನುಸಾರ ಪರಿಶೀಲಿಸಿ, ಲಭ್ಯವಿರುವ ರಜೆ ಮಂಜೂರು ಮಾಡಲು ಕ್ರಮ ವಹಿಸುವುದು.

14) ಬಜೆಟ್, ಕ್ರಿಯಾ ಯೋಜನೆ ಅನುಮೋದನೆ, ಇನ್ನಿತರ ವಿಷಯಗಳ ಬಗ್ಗೆ ಜಿಲ್ಲಾ ಪಂಚಾಯತಿ / ತಾಲ್ಲೂಕು ಪಂಚಾಯತಿಗಳಿಗೆ ಪ್ರಸ್ತಾವನೆಗಳು ಸ್ವೀಕೃತವಾದಾಗ ಸದರಿ ಪ್ರಸ್ತಾವನೆಗಳ ಬಗ್ಗೆ ಒಂದೇ ಬಾರಿಗೆ ಪರಿಶೀಲಿಸಿ ಒಂದು ವಾರದೊಳಗಾಗಿ ಅನುಮೋದನೆ ನೀಡಲು ಕ್ರಮವಹಿಸುವುದು.

25/2/16

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.